# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ–ವಿಭಾಗದ ವಾರ್ಡ್ ಸಂಖ್ಯೆ–152 ಎಸ್.ಜಿ.ಪಾಳ್ಯ ಕಛೇರಿಯಲ್ಲಿ ದಿನಾಂಕ: 06.03.2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು

* * * * * *

ದಿನಾಂಕ–06–03–2021ರಂದು ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲ್ಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚ್ರರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಚುನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚ್ರರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

ಸಭೆಗೆ ಹಾಜರಿದ್ದ ಅಧಿಕಾರಿ ವರ್ಗ/ ಸದಸ್ಯರು

| ಕ್ರ.ಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ.ಎಸ್.ಪ್ರಭಾಕರ್, ಮುಖ್ಯ ಅಭಿಯಂತರರು (ಪೂರ್ವ)ಬಿ.ಬಿ.ಎಂ.ಪಿ. | 9480685379 |
| 2 | ಶ್ರೀ.ಸತೀಶ್.ಡಿ ಸ.ಇಂ–152 ವಾರ್ಡ್ | 9964310730 |
| 3 | ಶ್ರೀ.ಅಜಯ್‌ಕುಮಾರ್ ಕಿರಿಯ ಆರೋಗ್ಯ ಪರಿವೀಕ್ಷಕರು | 963222304 |
| 4 | ಶ್ರೀ. ಓಬಳೇಶ್ ಹಿರಿಯ ಆರೋಗ್ಯ ಪರಿವೀಕ್ಷಕರು | 9945042307 |
| 4 | ಶ್ರೀ ಪುರುಷೋತ್ತಮ, (ಎಲೆಕ್ಟ್ರೀಕಲ್, ಬಿ.ಬಿ.ಎಂ.ಪಿ) | 9611177415 |
| 5 | ಶ್ರೀ.ಶಶಿಧರ ಸಹಾಯಕ ಅಭಿಯಂತರರು ಮೂಲಭೂತ ಸೌಕರ್ಯ ಕೇಂದ್ರ | 9341320868 |
| 6 | ಶ್ರೀಮತಿ.ಆಶಾ.ಹೆಚ್. ಸಹಾಯಕ ಅಭಿಯಂತರರು ಬೇಸ್ಕಾಂ | 9900724229 |
| 7 | ಶ್ರೀ.ಕೃಷ್ಣ.ಸಿ ಕೆಲಸ ಪರಿವೀಕ್ಷಕರು ಬಿ.ಡ.ಬ್ಲೂ.ಎಸ್.ಎಸ್.ಬಿ | 9845768405 |
| 8 | ಶ್ರೀ ಸೈಯದ್ ನಜರೂದ್ದಿನ್, ಸದಸ್ಯರು | 9741518897 |
| 9 | ಶ್ರೀ.ವಿ.ಗಿರೀಶ್ ವಿದ್ಯತ್ ವಿಭಾಗ ಬಿ.ಬಿ.ಎಂ.ಪಿ (ದಕ್ಷಿಣ) | 8951596617 |
| 10 | ಶ್ರೀ ತಿಮ್ಮಗೌಡ ಎ.ಎಸ್.ಐ ಮಡಿವಾಳ ಪೊಲೀಸ್ ಠಾಣೆ | 9845644651 |
| 11 | ಶ್ರೀ.ಮಂಜುನಾಥ್.ಪಿ ವಾರ್ಡ್ ಮೇಲ್ವಿಚಾರಕರು ಘ.ತ್ಯಾನಿ | 9740903427 |
| 12 | ಶ್ರೀ.ಎನ್.ಲೋಕೇಶ್ | 9448579144 |
| 13 | ಶ್ರೀಮತಿ.ಭೂದೇವಿ ತೋಟಗಾರಿಕೆ ಇಲಾಖೆ | 953897538 |
| 14 | ಶ್ರೀ.ಜಿನ್‌ಸನ್ | 9886263227 |
| 15 | ಶ್ರೀ.ಗಂಗಾದ್ರೀ ಮೇಲ್ವಿಚಾರಕರು ಘ.ತ್ಯಾನಿ | 9980225272 |
| 16 | ಮೊಹಮದ್ ಅಜ್ಮೀರ್ ಆರೀಫ್ ಸ.ಕಾ.ನಿ.ಅ ಮೂಲಭೂತ ಸೌಕರ್ಯ ಕೇಂದ್ರ | 9900260607 |

1) ಸಭೆಯಲ್ಲಿ ಹಾಜರಿದ್ದ ಬಹುತೇಕ ಸದಸ್ಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಕಸವನ್ನು ಸರಿಯಾಗಿ ವಿಲೇವಾರಿ ಯಾಗುತ್ತಿರುತ್ತಿಲ್ಲ ಎಂದು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಶ್ರೀ ಅಜಯ್ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ಬೆಳ್ಳಳ್ಳಿ ಘನತ್ಯಾಜ್ಯ ಘಟಕದಲ್ಲಿ ತೊಂದರೆಯಾಗಿರುವುದರಿಂದ ಸಮರ್ಪಕವಾಗಿ ಕಸ ವಿಲೇವಾರಿಯಾಗುತ್ತಿರುವುದಿಲ್ಲ ಎಂದು ತಿಳಿಸಿದರು.

   ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಮಾನ್ಯ ನೋಡಲ್ ಅಧಿಕಾರಿಗಳು ಬೆಳ್ಳಳ್ಳಿ ಘನತ್ಯಾಜ್ಯ ಘಟಕಕ್ಕೆ ದೂರವಾಣಿ ಮುಖೇನ ಸಂಪರ್ಕಿಸಿದಾಗ ಇವತ್ತಿನಿಂದ ಮತ್ತೆ ಘನತ್ಯಾಜ್ಯ ವಿಲೇವಾರಿ ಪ್ರಾರಂಭವಾಗುವುದೆಂದು ತಿಳಿಸಿರುತ್ತಾರೆ.

2) ಶ್ರೀ.ವಿಶ್ವಕುಮಾರ ರವರು ಮಾತನಾಡುತ್ತಾ, ಮಾರುತಿನಗರ ಸಿಟಿ ಕ್ಲಿನಿಕ್ ಹತ್ತಿರ 2 ಬೀದಿ ದೀಪದ ಫಿಟಿಂಗ್ಸ್ ಹಾಳಾಗಿರುತ್ತದೆ ಎಂದು ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರು ಶ್ರೀ ಜ್ಞಾನೇಶ್ ಸಹಾಯಕ ಅಭಿಯಂತರರು ವಿದ್ಯುತ್ ವಿಭಾಗ ಬಿ.ಬಿ.ಎಂ.ಪಿ ರವರಿಗೆ ದೂರವಾಣಿ ಮುಖೇನ ಮಾತನಾಡಿ ಬೀದಿ ದೀಪದ ಫಿಟಿಂಗ್ಸ್‌ಗಳನ್ನು ದುರಸ್ಥಿಪಡಿಸಲು ತಿಳಿಸಿದರು.

3) ಸಭೆಯಲ್ಲಿ ಹಾಜರಿದ್ದ ಶ್ರೀ.ಲೋಕೇಶ್ ಮಾತನಾಡಿ ಬೃಂದಾವನ ನಗರ 2ನೇ ಮುಖ್ಯರಸ್ತೆಯಲ್ಲಿ ಬಿ.ಡಬ್ಲೂ.ಎಸ್.ಎಸ್.ಬಿ ಇಲಾಖೆಯವರು ರಸ್ತೆ ಅಗೆದು ಹಾಗೆಯೆ ಬಿಟ್ಟಿರುವ ಬಗ್ಗೆ ತಿಳಿಸಿದರು.

ಈ ಬಗ್ಗೆ ಸಹಾಯಕ ಅಭಿಯಂತರರು ಮಾತನಾಡಿ ಸದರಿ ರಸ್ತೆಗಳ ಅಭಿವೃದ್ಧಿಗೆ ಟೆಂಡರ್ ಅಹ್ವಾನಿಸಲಾಗಿದ್ದು, ಅನುಮೋದನೆಗೆ ಸರ್ಕಾರದ ಹಂತದಲ್ಲಿರುತ್ತದೆ. ಆದುದರಿಂದ ತಾತ್ಕಾಲಿಕವಾಗಿ ಗುಂಡಿಗಳನ್ನು ಮುಚ್ಚಿ ಕ್ರಮವಹಿಸಲಾಗಿರುತ್ತದೆ.

4) ಬಾಲಾಜಿನಗರ 6ನೇ ಎ,ಬಿ,ಸಿ, ಮತ್ತು ಡಿ ರಸ್ತೆಗಳಲ್ಲಿ ರಸ್ತೆಯಲ್ಲಿ ಮ್ಯಾನ್‌ಹೋಲ್‌ಗಳ ದುರಸ್ಥಿ ಕಾರ್ಯ ಪೂರ್ಣಗೊಂಡಿದ್ದು, ಇದರ ಅವಶೇಷಗಳನ್ನು ತೆರವುಗೊಳಿಸಲು ಶ್ರೀ ನಸರುದ್ಧಿನ್ ವಾರ್ಡ್ ಸದಸ್ಯರು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ಕೂಡಲೇ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

5) ಕಳೆದ ಸಭೆಯಲ್ಲಿ ಪ್ರಸ್ತಾಪಿಸಿದ್ದ ಎಸ್.ಜಿ.ಪಾಳ್ಯ ವ್ಯಾಪ್ತಿಯ ಪ್ರದೇಶದ ಪಿ.ಜಿ ಗಳಲ್ಲಿ ಹುಡುಗ ಹುಡುಗಿಯವರು ಲಿವಿಂಗ್ ಟುಗೇದರ್ ನಡೆಸುತ್ತಿರುವುದು ಕಂಡುಬಂದಿದ್ದು, ಇದರಿಂದ ಆಯಾ ಪ್ರದೇಶದ ಮಕ್ಕಳು ಮತ್ತು ಸಾರ್ವಜನಿಕರಲ್ಲಿ ಕೆಟ್ಟರೀತಿಯ ಪ್ರಭಾವ/ಪರಿಣಾಮಗಳು ಬಿರುವುದು ಮತ್ತು ಮುಜುಗರವಾಗುತ್ತಿರುವುದರಿಂದ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ಎಂದು ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ಪೊಲೀಸ್ ಅಧಿಕಾರಿಗಳಿಗೆ ಮತ್ತು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಕೇಳಲಾಗಿ, ಈ ಬಗ್ಗೆ ವಾರ್ಡ್ ವ್ಯಾಪ್ತಿಯ ಪಿ.ಜಿಗಳನ್ನು ಪರಿಶೀಲಿಸಲಾಗುತ್ತಿದೆ ಹಾಗೂ ಖಚಿತವಾಗಿ ದೂರಗಳು ಬಂದರೆ ತಪಾಸಣೆಗೊಳಿಸಿ ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು.

6) ಕಳೆದ ಸಭೆಯಲ್ಲಿ ಪ್ರಸ್ತಾಪಿಸಿದ್ದ ಸೆಂಟ್ ಜಾನ್ಸ್ ವುಡ್ ರಸ್ತೆಯಲ್ಲಿ ರಸ್ತೆ ಅಗೆತವನ್ನು ಮುಚ್ಚಿ ಕ್ರಮವಹಿಸಲಾಗಿರುತ್ತದೆ.

7) ಮಾನ್ಯ ಅಧ್ಯಕ್ಷರು ಮಾತನಾಡಿ, ಪಾಲಿಕೆ ವಾರ್ಡ್ ಅನುದಾನಡಿಯಲ್ಲಿ 2021-22ನೇ ಸಾಲಿಗೆ ಮಿಸಲಿಟ್ಟ ಅನುದಾನಕ್ಕೆ ವಾರ್ಡ್ ಸದಸ್ಯರೊಂದಿಗೆ ಸಮಾಲೋಚನೆ ನಡೆಸಿ, ಚರ್ಚಿಸಿ ಅಗತ್ಯವಾಗಿರುವ ಕಾಮಗಾರಿಗಳನ್ನು ಅಳವಡಿಸಿಕೊಂಡು ಕ್ರಿಯೋಜನೆಯನ್ನು ತಯಾರಿಸಲು ತಿಳಿಸಿದರು.

8) ಶ್ರೀ.ನವೀನ್ ಕಂದಾಯ ಪರಿವೀಕ್ಷರು ಮಾತನಾಡಿ, ಜನವರಿ 2021ರ ಅಂತ್ಯದಲ್ಲಿ ರೂ.1.32 ಕೋಟಿ ಕಂದಾಯವನ್ನು ಸಂಗ್ರಹಿಸಲಾಗಿರುತ್ತದೆ. 33 ಆಸ್ತಿಗಳನ್ನು ಪರಿಷ್ಕರಿಸಲಾಗಿರುತ್ತದೆ ಮತ್ತು ಪ್ರತಿ ಬುಧವಾರ ತೆರಿಗೆ ಡ್ರೈವ್‌ನ್ನು ಹಮ್ಮಿಕೊಳ್ಳಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ, ಅದ್ಯಕ್ಷರು ಮಾತನಾಡಿ, ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ. ಸತೀಶ್.ಡಿ)
ಕಾರ್ಯದರ್ಶಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

S. Prabhakar
(ಶ್ರೀ. ಎಸ್.ಪ್ರಭಾಕರ್)
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

ಪ್ರತಿಯನ್ನು:

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ-ವಿಭಾಗ ರವರಿಗೆ ಮುಂದಿನ ಕ್ರಮಕ್ಕೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ(ದ) ರವರಿಗೆ ಮುಂದಿನ ಕ್ರಮಕ್ಕೆ.